# ಡಿ.ಕೆ. ಶಿವಕುಮಾರ ಕಾರ್ಯಕ್ರಮ ದೇಶದ ಇತಿಹಾಸದಲ್ಲಿ ಹೊಸ ದಾಖಲೆ ಬರೆಯಲಿದೆ: ಹೆಬ್ಬಾಳಕರ




ಬೆಳಗಾವಿ – ಜುಲೈ 2ರಂದು ಕರ್ನಾಟಕ ಪ್ರದೇಶ ಕಾಂಗ್ರೆಸ್ ಅಧ್ಯಕ್ಷರಾಗಿ ಟ್ರಬಲ್ ಶೂಟರ್ ಖ್ಯಾತಿಯ ಡಿ.ಕೆ.ಶಿವಕುಮಾರ ಅಧಿಕಾರ ಸ್ವೀಕರಿಸಲಿದ್ದಾರೆ. ಈ ಕಾರ್ಯಕ್ರಮ ದೇಶದ ಇತಿಹಾಸದಲ್ಲೇ ಹೊಸ ದಾಖಲೆ ಬರೆಯಲಿದ್ದು, ಕಾಂಗ್ರೆಸ್ ಪಕ್ಷ ಮತ್ತೊಮ್ಮೆ ರಾಜ್ಯದಲ್ಲಿ ಅಧಿಕಾರ ಹಿಡಿಯಲು ನಾಂದಿ ಹಾಡಲಿದೆ ಎಂದು ಕೆಪಿಸಿಸಿ ಮಹಿಳಾ ಘಟಕದ ಮಾಜಿ ರಾಜ್ಯಾಧ್ಯಕ್ಷೆ, ಶಾಸಕಿ ಲಕ್ಷ್ಮಿ ಹೆಬ್ಬಾಳಕರ್ ಹೇಳಿದ್ದಾರೆ.

ಜಿಲ್ಲಾ ಕಾಂಗ್ರೆಸ್ ಕಚೇರಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕೊರೋನಾ ಹಿನ್ನೆಲೆಯಲ್ಲಿ ಸಾಮಾಜಿಕ ಅಂತರ ಕಾಯ್ದುಕೊಂಡು ಕಾರ್ಯಕ್ರಮ ನಡೆಸಬೇಕಿರುವುದರಿಂದ ರಾಜ್ಯದ 7800 ಕಡೆಗಳಲ್ಲಿ ದೊಡ್ಡ ಸ್ಕ್ರೀನ್ ಅಳವಡಿಸಿ ವೀಕ್ಷಣೆಗೆ ಅವಕಾಶ ಕಲ್ಪಿಸಲಾಗುತ್ತಿದೆ. 10 ಲಕ್ಷ ಜನರು ಪಾಲ್ಗೊಳ್ಳಲಿದ್ದು, ಆರಂಭದಲ್ಲಿ ರಾಷ್ಟ್ರಗೀತೆಗೆ ಎದ್ದು ಹಾಡುವಾಗಿ ಎದ್ದುನಿಂತು ಪ್ರತಿಜ್ಞೆ ಸ್ವೀಕರಿಸಲಿದ್ದಾರೆ ಎಂದು ತಿಳಿಸಿದರು.

ಬೆಳಗಾವಿ ಜಿಲ್ಲೆಯಲ್ಲೂ ಸುಮಾರು 550 ಕಡೆಗಳಲ್ಲಿ ಕಾರ್ಯಕ್ರಮ ವೀಕ್ಷಣೆಯ ವ್ಯವಸ್ಥೆ ಮಾಡಲಾಗುತ್ತಿದೆ. ಜನರು 7676366666 ನಂಬರಿಗೆ ಮಿಸ್ಡ್ ಕಾಲ್ ಕೊಡುವ ಮೂಲಕ ಕಾರ್ಯಕ್ರಮವನ್ನು ಬೆಂಬಲಿಸಲಿದ್ದಾರೆ ಎಂದರು.

ನಾವು ಡಿಜಿಟಲ್ ವ್ಯವಸ್ಥೆ ಬಳಸಿಕೊಂಡು ಈ ಕಾರ್ಯಕ್ರಮವನ್ನು ಅತ್ಯಂತ ವಿಶಿಷ್ಟವಾಗಿ ಮಾಡುತ್ತಿದ್ದೇವೆ. ಇದು ಯಾರ ಕಾಪಿಯೂ ಅಲ್ಲ, ನಾವು ಯಾರದ್ದೂ ಕಾಪಿ ಮಾಡುವುದಿಲ್ಲ. ಬದಲಾಗಿ ನಮ್ಮ ನೂರಾರು ಯೋಜನೆಗಳನ್ನು ಬೇರೆಯವರು ಕಾಪಿ ಮಾಡಿದ್ದನ್ನು ಉದಾಹರಣೆ ಸಹಿತ ತೋರಿಸಬಲ್ಲೆ ಎಂದು ಲಕ್ಷ್ಮಿ ಹೆಬ್ಬಾಳಕರ್ ತಿಳಿಸಿದರು.

ಹೆಮ್ಮೆಯ ಸುಪುತ್ರ

ನೂತನ ಜಿಲ್ಲಾ ಕಾಂಗ್ರೆಸ್ ಕಚೇರಿಯಲ್ಲಿ ಮೊದಲ ಬಾರಿಗೆ ಪತ್ರಿಕಾಗೋಷ್ಠಿ ನಡೆಸಿದ ಲಕ್ಷ್ಮಿ ಹೆಬ್ಬಾಳಕರ್, ಅದನ್ನು ಕಾಂಗ್ರೆಸ್ ದೇವಸ್ಥಾನ ಎಂದು ಬಣ್ಣಿಸಿದರು.ನಾನು ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷೆಯಾಗಿದ್ದಾಗ ಕಷ್ಟಪಟ್ಟು ಈ ಜಾಗವನ್ನು ಪಡೆದು ಇಲ್ಲಿ ಕಾಂಗ್ರೆಸ್ ಕಚೇರಿ ನಿರ್ಮಾಣಕ್ಕೆ ಚಾಲನೆಯನ್ನು ನೀಡಿದ್ದೆ. ಇಲ್ಲಿ ಮೊದಲ ಪತ್ರಿಕಾಗೋಷ್ಠಿ ನಡೆಸುತ್ತಿದ್ದೇನೆ. ಇದನ್ನು ನಾನು ಕಾಂಗ್ರೆಸ್ ದೇವಸ್ಥಾನ ಎಂದು ಕರೆಯುತ್ತೇನೆ ಎಂದು ಲಕ್ಷ್ಮಿ ಹೆಬ್ಬಾಳಕರ್ ಭಾವನಾತ್ಮಕವಾಗಿ ನುಡಿದರು.

ಡಿ.ಕೆ.ಶುವಕುಮಾರ ಅವರ ಜೊತೆಗೆ ಜಿಲ್ಲೆಯ ಹೆಮ್ಮೆಯ ಸುಪುತ್ರ ಸತೀಶ್ ಜಾರಕಿಹೊಳಿ ಹಾಗೂ ಈಶ್ವರ ಖಂಡ್ರೆ ಮತ್ತು ಸಲೀಂ ಅಹ್ಮದ್ ಅವರು ಕೂಡ ಕಾರ್ಯಾಧ್ಯಕ್ಷರಾಗಿ ಅಧಿಕಾರ ಸ್ವೀಕರಿಸಲಿದ್ದಾರೆ ಎಂದು ಹೆಬ್ಬಾಳಕರ್ ಹೇಳಿದರು.

ಬೆಳಗಾವಿ ಜಿಲ್ಲೆಯ ಕಾಂಗ್ರೆಸ್ ಪಕ್ಷದ ಎಲ್ಲ ಮುಖಂಡರೂ ಒಗ್ಗಟ್ಟಿನಿಂದಿದ್ದೇವೆ. ನಮ್ಮಲ್ಲಿ ಯಾವುದೇ ಭಿನ್ನಾಭಿಪ್ರಾಯವಿಲ್ಲ. ಸತೀಶ್ ಜಾರಕಿಹೊಳಿ ಕೂಡ ನಮ್ಮ ಮುಖಂಡರು. ಕಾರ್ಯಕ್ರಮಕ್ಕೆ ಹೆಚ್ಚು ಪ್ರಚಾರ ಸಿಗಲಿ ಎನ್ನುವ ಕಾರಣಕ್ಕೆ ಬೇರೆ ಬೇರೆ ಪತ್ರಿಕಾಗೋಷ್ಠಿ ನಡೆಸುತ್ತಿದ್ದೇವೆ. ಇಂದು ಎಲ್ಲ ಜಿಲ್ಲೆಗಳಲ್ಲೂ ಪತ್ರಿಕಾಗೋಷ್ಠಿ ನಡೆಸಿ ಮಾಹಿತಿ ನೀಡುತ್ತಿದ್ದೇವೆ ಎಂದರು. ಮಾಜಿ ಶಾಸಕ ಫಿರೋಜ್ ಸೇಠ್, ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ವಿನಯ ನಾವಲಗಟ್ಟಿ, ರಾಜು ಸೇಠ್ ಮೊದಲಾದವರು ಇದ್ದರು.

## ಚಿಕಿತ್ಸೆ ಫಲಿಸದೆ ಅಪರಿಚಿತ ವ್ಯಕ್ತಿ ಸಾವು



ಬೆಳಗಾವಿ, ಜೂ. 29 : ಜೂನ್ 28 ರಂದು ನಗರದ ಚೆನ್ನಮ್ಮ ವೃತ್ತದ ಬಳಿ ಇರುವ ಕಾಕತಿ ಬಸ್ ನಿಲ್ದಾಣದ ಬಳಿ 28 ವರ್ಷದ ವ್ಯಕ್ತಿ ಪ್ರಜ್ಞಾಹೀನ ಸ್ಥಿತಿಯಲ್ಲಿ ಬಿದ್ದಿದ್ದು, ಜಿಲ್ಲಾ ಆಸ್ಪತ್ರೆಗೆ ದಾಖಲಿಸಿದಾಗ ಚಿಕಿತ್ಸೆ ಫಲಿಸದೆ ಅಪರಿಚಿತ ವ್ಯಕ್ತಿ ಸಾವನ್ನಪ್ಪಿದ್ದಾನೆ.

ಎತ್ತರ 5.5, ಸಾದಾರಣ ಮೈ ಬಣ್ಣ, ಗುಂಡು ಮೂಗು, ಕಪ್ಪು ತಲೆ ಕೂದಲು, ಬೂದ ಬಣ್ಣದ ಶರ್ಟ್ ಹಾಗೂ ಕಪ್ಪು ಬಣ್ಣದ ಜೀನ್ಸ್ ಪ್ಯಾಂಟ್ ವ್ಯಕ್ತಿ ಧರಿಸಿದ್ದು, ಈ ವ್ಯಕ್ತಿಯ ಬಗ್ಗೆ ಮಾಹಿತಿ ಸಿಕ್ಕಲ್ಲಿ ಎ.ಪಿ.ಎಂ.ಸಿ ಪೊಲೀಸ್ ಠಾಣೆ ದೂರವಾಣಿ ಸಂಖ್ಯೆ 08312405250 ಅಥವಾ ಮೊಬೈಲ್ ಸಂಖ್ಯೆ 9480804106, 9480804047 ಗೆ ಸಂಪರ್ಕಿಸಲು ಎ.ಪಿ.ಎಂ.ಸಿ ಪೊಲೀಸ್ ಠಾಣೆ ಪ್ರಕಟಣೆಯಲ್ಲಿ ತಿಳಿಸಿದೆ.

## ಅರ್ಜಿ ಸಲ್ಲಿಸಲು ಅವಧಿ ವಿಸ್ತರಣೆ

ಬೆಳಗಾವಿ, ಜೂ. 29: ಅಗಸರು ಮತ್ತು ಕ್ಷೌರಿಕರ ಕುಟುಂಬಗಳ ತಲಾ ಒಬ್ಬರಿಗೆ ಐದು ಸಾವಿರ ರೂಪಾಯಿಗಳ ಸಹಾಯಧನವನ್ನು ಸರಕಾರದ ವತಿಯಿಂದ ನೀಡಲಾಗುತ್ತಿದ್ದು, ಧನಸಹಾಯಕ್ಕೆ ಅರ್ಜಿ ಸಲ್ಲಿಸಲು ಜೂನ್ 30 ಕೊನೆಯ ದಿನಾಂಕವೆಂದು ನಿಗದಿಪಡಿಸಲಾಗಿತ್ತು. ಆದರೆ ಅರ್ಜಿ ಸಲ್ಲಿಸಲು ಜುಲೈ 10 ರವರೆಗೆ ವಿಸ್ತರಿಸಲಾಗಿದೆ ಎಂದು ಉಪ ಕಾರ್ಮಿಕ ಆಯುಕ್ತ ವೆಂಕಟೇಶ ಶಿಂದಿಹಟ್ಟಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# 1.25 ಕೋಟಿ ರೂ ವೆಚ್ಚದಲ್ಲಿ ಉದ್ಯಾನಗಳ ಅಭಿವೃದ್ಧಿಗೆ ಲಕ್ಷ್ಮಿ ಹೆಬ್ಬಾಳಕರ್ ಚಾಲನೆ

## ನಗರಾಭಿವೃದ್ಧಿ ಪ್ರಾಧಿಕಾರದ ಅನುದಾನದಲ್ಲಿ ಅಂಬೇಡ್ಕರ್ ಭವನ ಸೇರಿದಂತೆ ಹಲವು ಯೋಜನೆ



ಬೆಳಗಾವಿ – ಬೆಳಗಾವಿ ನಗರಾಭಿವೃದ್ಧಿ ಪ್ರಾಧಿಕಾರದ ವತಿಯಿಂದ ಗ್ರಾಮೀಣ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಸುಮಾರು 1.25 ಕೋಟಿ ರೂ. ವೆಚ್ಚದಲ್ಲಿ ನೂತನ ಉದ್ಯಾನವನಗಳ (ಗಾರ್ಡನ್ಸ್) ಕಾಮಗಾರಿಗಳಿಗೆ ಶಾಸಕಿ ಲಕ್ಷ್ಮಿ ಹೆಬ್ಬಾಳಕರ್ ಭಾನುವಾರ ಚಾಲನೆಯನ್ನು ನೀಡಿದರು.

ಕ್ಷೇತ್ರದ ಜನತೆ ಹಲವಾರು ವರ್ಷಗಳಿಂದ ಉದ್ಯಾನಗಳ ಅಭಿವೃದ್ಧಿಯ ಬೇಡಿಕೆ ಇಟ್ಟಿದ್ದರು. ಅವರ ಹಲವಾರು ವರ್ಷಗಳ ಕನಸುಗಳು ಹಂತ ಹಂತವಾಗಿ ಈಡೇರುತ್ತಿದ್ದು, ವಿವಿಧ ಯೋಜನೆಗಳ ಅಡಿಯಲ್ಲಿ ಕ್ಷೇತ್ರವನ್ನು ಸಮಗ್ರ ಅಭಿವೃದ್ಧಿಯತ್ತ ಕೊಂಡೊಯ್ಯಲಾಗುತ್ತಿದೆ.ಇಂದು ಸಮರ್ಥ ಕಾಲೋನಿ, ಸಾಯಿನಂದನ್ ರೆಸಿಡೆನ್ಸಿ, ಡ್ರೈವರ್ಸ್ ಕಾಲೋನಿ, ಲಿಂಗರಾಜ ಕಾಲೋನಿ ಪ್ರದೇಶಗಳಲ್ಲಿ ನೂತನವಾಗಿ ಉದ್ಯಾನವನ (ಗಾರ್ಡನ್) ಹಾಗೂ ಕಾಂಪೌಂಡ್ ವಾಲ್ ಗಳ ನಿರ್ಮಾಣ ಮತ್ತು ಸಹ್ಯಾದ್ರಿ ನಗರ ಉದ್ಯಾನವನದಲ್ಲಿ ಸುಮಾರು ಇಪ್ಪತ್ತೈದು ಲಕ್ಷ ರೂ. ವೆಚ್ಚದಲ್ಲಿ ಹೊಸದಾಗಿ ಅಂಬೇಡ್ಕರ್ ಭವನ ನಿರ್ಮಿಸುವ ಕಾಮಗಾರಿಗಳಿಗೆ ಚಾಲನೆ ನೀಡಲಾಯಿತು.ಶಾಸಕಿ ಲಕ್ಷ್ಮಿ ಹೆಬ್ಬಾಳಕರ್ ಅವರ ನಿರಂತರ ಪ್ರಯತ್ನ ಮತ್ತು ಅಭಿವೃದ್ಧಿ ಯೋಜನೆಗಳ ಕುರಿತು ಕ್ಷೇತ್ರದ ಜನರು ತೀವ್ರ ಹರ್ಷ ವ್ಯಕ್ತಪಡಿಸಿ, ಇಂತಹ ಶಾಸಕರಿದ್ದರೆ ಇಡೀ ರಾಜ್ಯ ನಂದನವನವಾಗುವುದರಲ್ಲಿ ಆಶ್ಚರ್ಯವಿಲ್ಲ ಎಂದರು.

ಕಾಮಗಾರಿಗಳ ಚಾಲನೆಯ ಸಂದರ್ಭದಲ್ಲಿ ಸ್ಥಳೀಯ ನಿವಾಸಿಗಳು, ಸಂಬಂಧಪಟ್ಟ ಅಧಿಕಾರಿಗಳು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.

# ಕಂಟೇನ್ಮೆಂಟ್ ವಲಯಗಳಲ್ಲಿ ಲಾಕ್‌ಡೌನ್ ಅವಧಿ ವಿಸ್ತರಿಸಿ ಆದೇಶ

ವಿಜಯಪುರ : ಕೇಂದ್ರ ಸರ್ಕಾರದ ಆದೇಶದಂತೆ ದಿನಾಂಕ : 30–05–2020 ರಂದು ಕಂಟೇನ್ಮೆಂಟ್ ವಲಯಗಳಲ್ಲಿ ಜಾರಿಗೊಳಿಸಲಾಗಿದ್ದ ಲಾಕ್‌ಡೌನ್ ಅನ್ನು ದಿನಾಂಕ : 30–06–2020 ರವರೆಗೆ ವಿಸ್ತರಿಸಲಾಗಿದೆ ಎಂದು ಸರ್ಕಾರದ ಮುಖ್ಯ ಕಾರ್ಯದರ್ಶಿ ವಿಜಯ್‌ಭಾಸ್ಕರ್ ಅವರು ಆದೇಶ ಹೊರಡಿಸಿದ್ದಾರೆಂದು ಜಿಲ್ಲಾಧಿಕಾರಿ ವೈ.ಎಸ್ ಪಾಟೀಲ ಅವರು ತಿಳಿಸಿದ್ದಾರೆ.

ಅದರಂತೆ ಕಂಟೇನ್ಮೆಂಟ್ ವಲಯಗಳನ್ನು ಹೊರತುಪಡಿಸಿದ ಪ್ರದೇಶಗಳಲ್ಲಿ ಹಂತಹಂತವಾಗಿ ನಿಷೇಧಿತ ಚಟುವಟಿಕೆಗಳನ್ನು ತೆರೆಯಲು ಲಾಕ್‌ಡೌನ್ ಸಡಿಲಿಕೆಯ ಬಗ್ಗೆ ಹೊಸ ಮಾರ್ಗಸೂಚಿಗಳನ್ನು ಹೊರಡಿಸಿದೆ. ತತ್ಪರಿಣಾಮವಾಗಿ ರಾಜ್ಯ ಸರ್ಕಾರವು ದಿನಾಂಕ : 30–05–2020 ರಲ್ಲಿ ಜಾರಿಗೊಳಿಸಿರುವ ಕಂಟೇನ್ಮೆಂಟ್ ವಲಯಗಳಲ್ಲಿನ ಲಾಕ್‌ಡೌನ್‌ನ್ನು ದಿನಾಂಕ : 30–06–2020 ರವರೆಗೆ ವಿಸ್ತರಿಸಿದೆ.

ಕಂಟೇನ್ಮೆಂಟ್ ವಲಯಗಳನ್ನು ಹೊರತುಪಡಿಸಿದ ಪ್ರದೇಶಗಳಲ್ಲಿ ಹಂತಹಂತವಾಗಿ ನಿಷೇಧಿತ ಚಟುವಟಿಕೆಗಳನ್ನು ತೆರೆಯಲು ಮಾರ್ಗಸೂಚಿಗಳನ್ನು ಹೊರಡಿಸಿದೆ. ಈ ಮಾರ್ಗಸೂಚಿಗಳು ದಿನಾಂಕ : 30–06–2020 ರವರೆಗೆ ಜಾರಿಯಲ್ಲಿರುತ್ತವೆ.

ರಾಜ್ಯದಲ್ಲಿ ಕೋವಿಡ್–19 ಸೋಂಕು ಪ್ರಕರಣಗಳು ಉಲ್ಬಣಗೊಳ್ಳುತ್ತಿರುವ ಹಿನ್ನೆಲೆಯಲ್ಲಿ ಪ್ರಸ್ತುತ ಪರಿಸ್ಥಿತಿಯನ್ನು ಪರಾಮರ್ಶಿಸಿ ಸರ್ಕಾರವು ಈ ಸೋಂಕನ್ನು ಪರಿಣಾಮಕಾರಿಯಾಗಿ ನಿಯಂತ್ರಿಸುವ ನಿಟ್ಟಿನಲ್ಲಿ ಹಾಗೂ ಹೆಚ್ಚಿನ ಮುಂಜಾಗ್ರತಾ ಕ್ರಮಗಳನ್ನು ತೆಗೆದುಕೊಳ್ಳುವ ಸಂಬಂಧವಾಗಿ ಹಾಲಿ ಚಾಲ್ತಿಯಲ್ಲಿರುವ ಮುಂಜಾಗ್ರತಾ ಕ್ರಮಗಳ ಜೊತೆಗೆ ಇನ್ನೂ ಹೆಚ್ಚಿನ ಮುಂಜಾಗ್ರತಾ ಕ್ರಮಗಳನ್ನು ತೆಗೆದುಕೊಳ್ಳುವುದು ಅತ್ಯವಶ್ಯಕವೆಂದು ನಿರ್ಧರಿಸಿದೆ.

ಈ ನಿಟ್ಟಿನಲ್ಲಿ ದಿನಾಂಕ 05–07–2020 ರ ಭಾನುವಾರದಿಂದ ಮುಂದಿನ ನಾಲ್ಕು ಭಾನುವಾರಗಳು ಅಂದರೆ ದಿನಾಂಕ : 02–08–2020 ರವರೆಗಿನ ಎಲ್ಲಾ ಭಾನುವಾರಗಳಂದು ಪೂರ್ಣ ದಿನದ ಲಾಕ್‌ಡೌನ್ ಇರತಕ್ಕದ್ದು. ಆದರೆ ಅಗತ್ಯ ಸರಕು ಸರಂಜಾಮುಗಳ ಸಾಗಾಣಿಕೆಗೆ ಯಾವುದೇ ನಿರ್ಬಂಧವಿರುವುದಿಲ್ಲ.

ರಾಜ್ಯ ಸರ್ಕಾರದ ಎಲ್ಲಾ ಇಲಾಖೆಗಳು, ಕಚೇರಿಗಳು, ಬೋರ್ಡ್‌ಗಳು ಮತ್ತು ಕಾರ್ಪೋರೇಶನ್‌ಗಳು (ತುರ್ತು ಮತ್ತು ಅಗತ್ಯ ಸೇವೆಗಳನ್ನು ಒದಗಿಸುವಂತಹ ಇಲಾಖೆಗಳು, ಕಚೇರಿಗಳು, ಬೋರ್ಡ್‌ಗಳು ಮತ್ತು ಕಾರ್ಪೋರೇಶನ್‌ಗಳನ್ನು ಹೊರತುಪಡಿಸಿ) ಈಗಿರುವ ಎರಡನೇ ಶನಿವಾರ ಮತ್ತು ನಾಲ್ಕನೇ ಶನಿವಾರಗಳನ್ನು ಸೇರಿಸಿಕೊಂಡಂತೆ 2020ರ ಜುಲೈ 10 ರಿಂದ ಎಲ್ಲಾ ಶನಿವಾರಗಳಂದು ದಿನಾಂಕ : 08–08–2020 ರವರೆಗೆ ಮುಚ್ಚಲ್ಪಡುತ್ತವೆ.

ರಾಜ್ಯಾದ್ಯಂತ ರಾತ್ರಿ 8 ರಿಂದ ಬೆಳಿಗ್ಗೆ 5 ರವರೆಗೆ ರಾತ್ರಿ ಕರ್ಫ್ಯೂ ಜಾರಿಯಲ್ಲಿರುತ್ತದೆ. ಈ ಕರ್ಫ್ಯೂ ಅವಧಿಯಲ್ಲಿ ಅತ್ಯಗತ್ಯ ಚಟುವಟಿಕೆಗಳನ್ನು ಹೊರತುಪಡಿಸಿ ಉಳಿದಂತೆ ವ್ಯಕ್ತಿಗಳ ಚಲನೆಯನ್ನು ಕಟ್ಟುನಿಟ್ಟಾಗಿ ನಿಷೇಧಿಸಲಾಗಿದೆ ಎಂದು ಅವರು ತಿಳಿಸಿದ್ದಾರೆ.

# ರೈತ– ನೇಕಾರರಿಗೆ ಶೂನ್ಯ ಬಡ್ಡಿ ದರದಲ್ಲಿ 3 ಲಕ್ಷ ರೂ., ಸಾಲ ಡಿಸಿಸಿ ಬ್ಯಾಂಕ್ ಚುನಾವಣೆ ಸ್ಪರ್ಧಿಗಳ ನಿಲುವು ಬಹಿರಂಗವಾಗಲಿ: ಹೊಂಗಲ್ ಆಗ್ರಹ



ಇಳಕಲ್: ವಿವಿಧ ಕ್ಷೇತ್ರಗಳಿಂದ ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕಿನ ನಿರ್ದೇಶಕ ಮಂಡಳಿ ಚುನಾವಣೆಗೆ ಸ್ಪರ್ಧಿಸುವವರು ರೈತರಿಗೆ ನೇಕಾರರಿಗೆ ಶೂನ್ಯ ಬಡ್ಡಿ ದರದಲ್ಲಿ 3 ಲಕ್ಷ ರೂಪಾಯಿಗಳ ಗರಿಷ್ಠ ಮೊತ್ತದ ಸಾಲ ಸೌಲಭ್ಯ ವಿತರಣೆ ಕುರಿತ ವಿಚಾರದಲ್ಲಿ ತಮ್ಮ ನಿಲುವು ಏನೆಂಬುದನ್ನು ಸ್ಪಷ್ಟಪಡಿಸಬೇಕು ಎಂದು ಸಾಮಾಜಿಕ ಹೋರಾಟಗಾರ ನಾಗರಾಜ ಹೊಂಗಲ್ ಆಗ್ರಹಿಸಿದ್ದಾರೆ.

ಬಾಲಕೋಟೆ ಡಿಸಿಸಿ ಬ್ಯಾಂಕ್‌ನಡಿ 267 ಪ್ರಾಥಮಿಕ ಕೃಷಿ ಪತ್ತಿನ ಸಹಕಾರ (ಪಿಕೆಪಿಎಸ್) ಸಂಘ, ಡಿಸಿಸಿ ಬ್ಯಾಂಕಿನ 47 ಶಾಖೆಗಳಿವೆ. ಇವೆಲ್ಲವೂ ಜಿಲ್ಲೆಯಲ್ಲಿನ ರೈತರಿಗೆ ಮೂರು ಲಕ್ಷ ರೂ.,ಗಳವರೆಗೆ ಶೂನ್ಯ ಬಡ್ಡಿ ದರದಲ್ಲಿ ಸಾಲ ಕೊಡಬೇಕು.

ಆದರೆ ಯಾವುದೇ ಪಿಕೆಪಿಎಸ್ ಆಗಲೀ ಡಿಸಿಸಿ ಬ್ಯಾಂಕಿನ ಶಾಖೆಯಾಗಲೀ ರೈತರಿಗೆ ಶೂನ್ಯ ಬಡ್ಡಿ ದರದಲ್ಲಿ 3 ಲಕ್ಷ ರೂ.,ಗಳ ಸಾಲ ವಿತರಣೆ ಮಾಡಿಲ್ಲ. ಕೇವಲ 50 ಸಾವಿರ ರೂ., ಸಾಲ ವಿತರಿಸಿವೆ. ಈ ಹಿನ್ನೆಲೆಯಲ್ಲಿ ನಿರ್ದೇಶಕ ಮಂಡಳಿಯಿಂದ ನಿರ್ಗಮಿಸುವವರು ಹಾಗೂ ಸ್ಪರ್ಧೆಗೆ ಇಳಿಯುವವರು ಈ ಬಗ್ಗೆ ರೈತರು ಮತ್ತು ವೃತ್ತಿ ನೇಕಾರರ ಸಮುದಾಯಕ್ಕೆ ನಿಲುವು ಸ್ಪಷ್ಟಪಡಿಸುವ ಅಗತ್ಯವಿದೆ ಎಂದು ಅವರು ಪತ್ರಿಕಾಗೋಷ್ಠಿಯಲ್ಲಿ ತಿಳಿಸಿದರು.ಡಿಸಿಸಿ ಬ್ಯಾಂಕ್ ನೇಕಾರರಿಗೆ ವೈಯಕ್ತಿಕ ನೇರ ಸಾಲ ಕೊಡುವ ಕುರಿತು ಗೊತ್ತುವಳಿ ಅಂಗೀಕರಿಸಿದೆ. ಆದರೆ ತಾನೇ ಅಂಗೀಕರಿಸಿದ ಗೊತ್ತವಳಿಯನ್ನು ಧಿಕ್ಕರಿಸಿದೆ. ಇದು ಘೋರ ಅನ್ಯಾಯ ಎಂದ ಅವರು ನೇಕಾರರಿಗೆ ನೇರ ಸಾಲದ ವಿಚಾರದಲ್ಲಿ ಅಜಯ ಕುಮಾರ ಸರನಾಯಕರ ಮೇಲೆ ಸಾಕಷ್ಟು ವಿಶ್ವಾಸವಿತ್ತು. ಆದರೆ ಅವರೂ ಸೇರಿದಂತೆ ನಿರ್ದೇಶಕ ಮಂಡಳಿ ಸದಸ್ಯರು ಈ ಬಗ್ಗೆ ಅತಿ ಉದಾಸೀನತೆ ತೋರಿದರು ಎಂದು ಅವರು ಹೇಳಿದರು.ವಿವಿಧ ಕ್ಷೇತ್ರಗಳಿಂದ ಡಿಸಿಸಿ ಬ್ಯಾಂಕ್ ಪ್ರವೇಶಿಸಿದವರು ರೈತ– ನೇಕಾರರ ವಿರೋಧಿ ಧೋರಣೆ ಅನುಸರಿಸಿದ್ದಾರೆ. ಸಾಲದ ಸವಲತ್ತುಗಳನ್ನು ತಲುಪಿಸುವ ವಿಚಾರದಲ್ಲಿ ಇಚ್ಛಾಶಕ್ತಿಯನ್ನು ಪ್ರದರ್ಶಿಸಲಿಲ್ಲ ಎಂದು ರೈತ ಸಂಘದ ಮಲ್ಲನಗೌಡ ತುಂಬದ, ರಾಮನಗೌಡ ಪಾಟೀಲ ಹೇಳಿದರು.

ಡಿಸಿಸಿ ಬ್ಯಾಂಕ ಚುನಾವಣೆ ಅಭ್ಯರ್ಥಿಗಳ ಆಯ್ಕೆ ವಿಚಾರದಲ್ಲಿ ರಾಜಕೀಯ ಪಕ್ಷಗಳೇ ನಿರ್ಧಾರ ತಳೆಯುತ್ತವೆ. ಈ ಹಂತದಲ್ಲಿ ರಾಜಕೀಯ ಪಕ್ಷಗಳು ಕೃಷಿ ಚಟುವಟಿಕೆ ಹಾಗೂ ನೇಕಾರಿಕೆ ಚಟುವಟಿಕೆಗಳೊಂದಿಗೆ ನೇರವಾಗಿ ನಂಟು ಹೊಂದಿರುವ ಅನುಭವಿ ಅಭ್ಯರ್ಥಿಗಳನ್ನೇ ಆಯ್ಕೆ ಮಾಡಬೇಕು ಎಂದು ಶ್ರೀಕೃಷ್ಣ ಜಾಲಿಹಾಳ ಹೇಳಿದರು.

ರೈತ ಪ್ರಮುಖರಾದ ಚನ್ನಬಸಪ್ಪ ಇಲಕಲ್, ನಾರಾಯಣಾಚಾರ ಪೂಜಾರ, ಬಸನಗೌಡ ಪಾಟೀಲ ಪತ್ರಿಕಾಗೋಷ್ಠಿಯಲ್ಲಿ ಹಾಜರಿದ್ದರು.

# ಗೀತಾ ನಾಗಭೂಷಣ್ ತಳ ಸಮುದಾಯದ ಮಹಿಳೆಯರ ಶೋಷಣೆಯ ವಿರುದ್ಧ ಧ್ವನಿ ಎತ್ತಿದ ಗಟ್ಟಿಗಿತ್ತಿ : ಯುವಸಾಹಿತಿ ಮಂಜುನಾಥ.ಎಸ್.ಕಟ್ಟಿಮನಿ

ವಿಜಯಪುರ : ಹಿರಿಯ ಸಾಹಿತಿ ಗೀತಾ ನಾಗಭೂಷಣ್ ಅವರ ನಿಧನಕ್ಕೆ ಜಿಲ್ಲೆಯ ಯುವಸಾಹಿತಿ ಮಂಜುನಾಥ.ಎಸ್.ಕಟ್ಟಿಮನಿ ಅವರು ತೀವ್ರ ಸಂತಾಪ ಸೂಚಿಸಿದ್ದಾರೆ.

ಈ ಕುರಿತು ಪತ್ರಿಕಾ ಹೇಳಿಕೆಯಲ್ಲಿ ಕನ್ನಡ ಸಾರಸತ್ವ ಲೋಕದ ಪ್ರೀತಿ ಹಾಗೂ ಅಭಿಮಾನದ ಗೀತೌವ್ವ, ನಾಡೋಜ ಹಾಗೂ ಕೇಂದ್ರ ಸಾಹಿತ್ಯ ಅಕಾಡೆಮಿ ಪ್ರಶಸ್ತಿ ಪುರಸ್ಕೃತೆಯಾಗಿರುವ ಹಿರಿಯ ಸಾಹಿತಿ ಗೀತಾ ನಾಗಭೂಷಣ್ ಅವರು ಕಲಬುರ್ಗಿಯ ಸ್ವಸ್ತಿಕ ನಗರದಲ್ಲಿ ವಾಸಿಸುತ್ತಿದ್ದರು. ಭಾನುವಾರ ಸಂಜೆ ಎದೆನೋವು ಕಾಣಿಸಿಕೊಂಡ ಹಿನ್ನೆಲೆಯಲ್ಲಿ ಅವರನ್ನು ಆಸ್ಪತ್ರೆಗೆ ದಾಖಲಿಸಲಾಗಿತ್ತು. ಆದರೆ ಚಿಕಿತ್ಸೆ ಫಲಿಸದೆ ಅವರು ಕೊನೆಯುಸಿರೆಳೆದಿದ್ದಾರೆ. ಅವರ ನಿಧನದಿಂದಾಗಿ ಕನ್ನಡ ಸಾರಸ್ವತ ಲೋಕಕ್ಕೆ ದೊಡ್ಡ ನಷ್ಟವಾಗಿದೆ.ಗೀತಾ ನಾಗಭೂಷಣ್ ಅವರು 2010 ರಲ್ಲಿ ಗದಗದಲ್ಲಿ ನಡೆದ ಅಖಿಲ ಭಾರತ ಸಾಹಿತ್ಯ ಸಮ್ಮೇಳನದ ಅಧ್ಯಕ್ಷತೆ ವಹಿಸಿದ್ದರು. ನಾಡೋಜ ಪ್ರಶಸ್ತಿ ಪಡೆದ ಮೊದಲ ಮಹಿಳಾ ಸಾಹಿತಿ ಎಂಬ ಹೆಗ್ಗಳಿಕೆಗೆ ಪಾತ್ರರಾಗಿದ್ದರು. ಇವರ "ಬದುಕು" ಕಾದಂಬರಿಗೆ ಕೇಂದ್ರ ಸಾಹಿತ್ಯ ಅಕಾಡೆಮಿ ಪ್ರಶಸ್ತಿ ಲಭಿಸಿದ್ದು, ಕೇಂದ್ರ ಸಾಹಿತಿ ಅಕಾಡೆಮಿ ಪ್ರಶಸ್ತಿ ಪುರಸ್ಕೃತರಾದ ಕರ್ನಾಟಕದ ಮೊದಲ ಮಹಿಳಾ ಸಾಹಿತಿಯಾಗಿದ್ದಾರೆ. ಅಷ್ಟೇ ಅಲ್ಲ ಕರ್ನಾಟಕ ಸಾಹಿತ್ಯ ಅಕಾಡೆಮಿಯ ಅಧ್ಯಕ್ಷರಾದ ಮೊದಲ ಮಹಿಳಾ ಸಾಹಿತಿಯಾಗಿದ್ದಾರೆ.ಕಲಬುರ್ಗಿ ಜಿಲ್ಲೆಯ ಒಂದು ಅತೀ ಹಿಂದುಳಿದ ಪುಟ್ಟ ಹಳ್ಳಿಯಲ್ಲಿ ಮಾರ್ಚ್ 25, 1942 ರಲ್ಲಿ ಜನಿಸಿ ಮೊಘಲಾಯಿ ಪರಿಸರದ ಪ್ರಮುಖ ಲೇಖಕಿ ಎಂದು ಪ್ರಖ್ಯಾತರಾಗಿದ್ದ ಗೀತಾ ನಾಗಭೂಷಣ್ ಅವರು ಬಡತನ, ಹೆಣ್ಣು ಮಕ್ಕಳನ್ನು ಶಾಲೆಗೆ ಕಳುಹಿಸದಂತಹ ಸಾಮಾಜಿಕ ವ್ಯವಸ್ಥೆಗಳನ್ನೆಲ್ಲ ಮೀರಿ ಬಿ.ಎ, ಬಿ.ಎಡ್, ಎಂ.ಎ ಪದವಿಗಳನ್ನು ಗಳಿಸಿ ಅಧ್ಯಾಪಕ ವೃತ್ತಿಯಲ್ಲಿ ತೊಡಗಿಸಿಕೊಂಡಿದ್ದರು. ಅಲ್ಲದೆ ಗೀತಾ ನಾಗಭೂಷಣ್ ತಳ ಸಮುದಾಯದ ಮಹಿಳೆಯರ ಶೋಷಣೆಯ ವಿರುದ್ಧ ಧ್ವನಿ ಎತ್ತಿದ ಗಟ್ಟಿಗಿತ್ತಿ.ಗೀತಾ ನಾಗಭೂಷಣ್ ಅವರು ಒಟ್ಟು 27 ಕಾದಂಬರಿಗಳನ್ನು ರಚಿಸಿದ್ದಾರೆ. "ಹಸಿಮಾಂಸ ಮತ್ತು ಹದ್ದುಗಳು" ಎಂಬ ಕಾದಂಬರಿಯು ಹೆಣ್ಣಿನ ಕೂಗು ಎಂಬ ಹೆಸರಿನಲ್ಲಿ ಚಲನಚಿತ್ರವಾಗಿದೆ. ಮಾತ್ರವಲ್ಲದೆ 50 ಸಣ್ಣ ಕಥೆಗಳು, ಎರಡು ಸಂಕಲನ, 12 ನಾಟಕಗಳು, ಒಂದು ಸಂಪಾದನಾ ಕೃತಿಗಳನ್ನು ರಚಿಸಿ ಕನ್ನಡ ಸಾಹಿತ್ಯ ಲೋಕಕ್ಕೆ ಅಪಾರ ಕೊಡುಗೆ ನೀಡಿದ್ದಾರೆ. ಇಂತಹ ಧೀಮಂತ ಲೇಖಕಿಯ ನಿಧನದಿಂದಾಗಿ ಕನ್ನಡ ಸಾರಸ್ವತ ಲೋಕಕ್ಕೆ ತುಂಬಲಾಗದ ದೊಡ್ಡ ನಷ್ಟವಾದಂತಾಗಿದೆ ಎಂದು ಅವರು ತಿಳಿಸಿದ್ದಾರೆ.

# ಗ್ರಾಮೀಣ ಭಾಗದ ವಿದ್ಯಾರ್ಥಿಗಳಿಗೆ ಆಶಾಕಿರಣವಾದ ಸಾಯಿ ನವೋದಯ ಸಂಸ್ಥೆ



ಮೂಡಲಗಿ: ಪಟ್ಟಣ, ನಗರ ಪ್ರದೇಶಗಳಲ್ಲಿ ಕಲಿಕಾ ಸೌಲಬ್ಯಗಳಿಂದ ವಿದ್ಯಾರ್ಥಿಗಳು ತಮ್ಮ ಪ್ರತಿಭೆ ತೋರಿಸುತ್ತಿರವ ಇಂತಹ ದಿನಗಳಲ್ಲಿ ಗ್ರಾಮೀಣ ಭಾಗದಲ್ಲಿ ಅಷ್ಟೇನು ಕಲಿಕಾ ಸೌಲಭ್ಯವು ದೊರೆಯದೆ ಇದ್ದರೂ ವಿದ್ಯಾರ್ಥಿಗಳ ಅಭಿರುಚಿಗೆ ತಕ್ಕಂತೆ ತರಬೇತಿ ನೀಡಿ ಅವರ ಭಾವಿ ಜೀವನಕ್ಕೆ ದಾರಿ ಮಾಡಿ ಕೊಡುತ್ತಿರುವ ತರಬೇತಿ ಸಂಸ್ಥೆಯೊಂದು ಕಳೆದ ಮೂರು ವರ್ಷಗಳಿಂದ ತೆರೆ ಮರೆಯಲ್ಲಿ ಸೇವೆ ಸಲ್ಲಿಸುತ್ತ ಗ್ರಾಮೀಣ ಭಾಗದ ಪ್ರಗತಿಪಥದತ್ತ ವಿದ್ಯಾರ್ಥಿಗಳ ಆಶಾಕಿರಣವಾಗಿ ಬೆಳೆಯುತ್ತಿದೆ.

ಮೂಡಲಗಿ ತಾಲೂಕಿನ ಶಿವಾಪೂರ(ಹ) ಗ್ರಾಮದಲ್ಲಿ ಸುದ್ದಿ ಮಾಡುತ್ತಿರುವ ಈ ಸಂಸ್ಥೆಯು ಪ್ರತಿ ವರ್ಷ ಶೇ 95ರಷ್ಟು ಫಲಿತಾಂಶ ನೀಡುತ್ತಿದೆ ಎಂದು ತಿಳಿದು ಬಂದಿದೆ. ಈ ಕುರಿತು ಸಂಸ್ಥೆಯ ಅದ್ಯಕ್ಷ ಸಚಿನ ಕುಂದರಗಿಯವರನ್ನು ಪತ್ರಿಕೆ ಸಂಪರ್ಕಿಸಿದಾಗ ಅದ್ಯಕ್ಷರು ಕೇಂದ್ರ ಹಾಗು ರಾಜ್ಯದ ವಸತಿ ಶಿಕ್ಷಣ ಸಂಸ್ಥೆಗಳ 2019–20ನೇ ಸಾಲಿನ ನವೋದಯ, ಮುರಾರ್ಜಿ, ಮೌಲಾನಾ ಆಜಾದ ಪ್ರವೇಶ ಪರೀಕ್ಷೆಯಲ್ಲಿ ಅತ್ಯುತ್ತಮ ಸಾಧನೆ ಮಾಡಿ 50 ವಿದ್ಯಾರ್ಥಿಗಳಲ್ಲಿ 48ವಿದ್ಯಾರ್ಥಿಗಳು ಪಾಸಾಗಿದ್ದಾರೆ. ಅದೇ ರೀತಿ 2017–18ರಲ್ಲಿ ಪರೀಕ್ಷೆಗೆ ಕುಳಿತ 15 ವಿದ್ಯಾಥಿಗಳು, 2018–19ರಲ್ಲಿ 40ವಿದ್ಯಾರ್ಥಿಗಳಲ್ಲಿ 36ವಿದ್ಯಾರ್ಥಿಗಳು ಪಾಸಾಗಿದ್ದಾರೆ ಅಲ್ಲದೆ ಸೈನಿಕ ಶಾಲೆ, ಆಳ್ವಾಸ್, ಆದರ್ಶ, ಮುರಾರ್ಜಿ ಇತರೆ ಶಾಲೆಗಳ ಪ್ರವೇಶ ಪರೀಕ್ಷೆಗಳಿಗೆ ತರಬೇತಿ ನೀಡಲಾಗುತ್ತಿದೆ.

ಇತ್ತೀಚಿಗೆ ನವೋದಯ ಪ್ರವೇಶ ಪರೀಕ್ಷೆಯಲ್ಲಿ ತೇರ್ಗಡೆಯಾದ ಕು.ವಿಷ್ಣು ಕರಗಣ್ಣೆ ಎಂಬ ವಿದ್ಯಾರ್ಥಿಯ ಪಾಲಕರನ್ನು ಸತ್ಕರಿಸಿದ ಸಮಯದಲ್ಲಿ ವಿದ್ಯಾರ್ಥಿಯ ತಂದೆ ನವೋದಯ ಪ್ರವೇಶ ಪರೀಕ್ಷೆಗೆ ನನ್ನ ಮಗ ವಿಷ್ಣು ಮತ್ತು ಆಳ್ವಾಸ್ ವಸತಿ ಶಾಲೆಗೆ ನನ್ನ ಮಗಳು ವಿದ್ಯಾಶ್ರಿಯು ಆಯ್ಕೆಯಾಗುವಂತೆ ತರಬೇತಿ ನೀಡಿದ ಶಿಕ್ಷಣ ಸಂಸ್ಥೆಯ ಅದ್ಯಕ್ಷ ಸಚಿನ ಕುಂದರಗಿಯವರಿಗೆ ಕೃತಜ್ಞತೆ ಸಲ್ಲಿಸಿದರು.

ಸತ್ಕಾರ ಸಮಯದಲ್ಲಿದ ಕರುನಾಡು ಸೈನಿಕ ತರಬೇತಿ ಕೇಂದ್ರದ ಸಂಚಾಲಕ ಶಂಕರ ತುಕ್ಕನ್ನವರ ಹಾಗೂ ಮಹಾದೇವ ನವಣಿ ಮತ್ತು ಗ್ರಾಮಸ್ಥರು ಸಾಯಿ ಸಂಸ್ಥೆಯ ಸಾಧನೆಗೆ ಮೆಚ್ಚುಗೆ ವ್ಯಕ್ತ ಪಡಿಸಿದರು.

# ನಿಯಮ ಉಲ್ಲಂಘಿಸಿದ ಮೂಡಲಗಿಯ ಕಾಯಿಪಲ್ಲೆ ದಲ್ಲಾಳಿ

## ಸರಕಾರದ ಆದಾಯಕ್ಕೆ ಟೋಪಿ ಹಾಕುತ್ತಿದ್ದರು ಕಣ್ಣಿದ್ದು ಕುರುಡರಾದ ಅಧಿಕಾರಿಗಳು



ಮೂಡಲಗಿ : ಸರಕಾರದ ನಿಯಮಗಳನ್ನು ಗಾಳಿಗೆ ತೂರಿ ತಮ್ಮ ವ್ಯಾಪಾರ ಮಾಡುತ್ತಿದ್ದರು ಕೂಡಾ ಅಧಿಕಾರಿಗಳು ಮಾತ್ರ ಕಣ್ಣಿದ್ದು ಕುರುಡರಂತೆ ಕಾರ್ಯನಿರ್ವಹಿಸುತ್ತಿದ್ದಾರೆ.

ಹೌದು ಮೂಡಲಗಿ ಪಟ್ಟಣದಲ್ಲಿ ಲಾಕ್‌ಡೌನ್ ಪ್ರಾರಂಭವಾದಾಗಿನಿಂದ ಕಾಯಿಪಲ್ಲೆ ಸಂತೆ ಸೇರುವ ಮುಖ್ಯ ಸ್ಥಳವಾದ ಬಾಜಿ ಮಾರುಕಟ್ಟೆಯಲ್ಲಿ ಸಂತೆ ನಡೆಯುತ್ತಿರಲಿಲ್ಲಾ ಅದರ ಬದಲಾಗಿ ಬೇರೆ ಬೇರೆ ಸ್ಥಳಗಳಲ್ಲಿ ಸಂತೆ ಸೇರುತ್ತಿದ್ದರು.

ರವಿವಾರ ಸೇರುವ ಸಂತೆಯಲ್ಲಿ ಪತ್ರಕರ್ತರ ಕ್ಯಾಮೆರಾ ಕಣ್ಣಿಗೆ ಸೇರೆಯಾದ ಚಿತ್ರದಲ್ಲಿ ಇರುವ ಗಾಂಧಿ ಚೌಕದಲ್ಲಿ ಕಾಯಿಪಲ್ಲೆ ಮಾರುವವರು ಮತ್ತು ಗ್ರಾಹಕರು ಮಾಸ್ಕ ಧರಿಸದೆ ಸಾಮಾಜಿಕ ಅಂತರ ಕಾಯ್ದುಕೊಳ್ಳದೆ ಕೊರೋನಾ ವೈರಸ್‌ಗೆ ಆಹ್ವಾನ ನೀಡುವಂತೆ ವ್ಯಾಪಾರ ಮಾಡುತ್ತಿದ್ದಾರೆ ಮುಖವಾಗಿ ಕಾಯಿಪಲ್ಲೆ ಲಿಲಾವ ಮಾಡುವ ದಲ್ಲಾಳಿಯು ನಿಯಮ ಉಲ್ಲಂಘಿಸಿದ್ದು ಕಂಡು ಬಂದಿದೆ.

ಬಾಜಿ ಮಾರ್ಕೆಟ್ ಆವರಣದಲ್ಲಿ ಪ್ಲಾಸ್ಟಿಕ್ ಹಗ್ಗಗಳ ವ್ಯಾಪಾರ ಜೋರಾಗಿದ್ದು ಹಗ್ಗವು ಸಹ ಅಗತ್ಯ ವಸ್ತುಗಳಲ್ಲಿ ಸೇರುತೆದೆಯೊ ಎಂದು ಸಾರ್ವಜನಿಕ ವಲಯುದಲ್ಲಿ ಚರ್ಚೆಗೆ ಗ್ರಾಸವಾಗಿದೆ.ಇದೆ ರೀತಿ ಮುಂದುವರೆದರೆ ಮುಂದೆ ಒಂದು ದಿನ ಕೊರೋನಾ ಮಹಾಮಾರಿ ವಕ್ಕರಿಸಿದರೆ ಸಾರ್ವಜನಿಕರಿಗೆ ಹಗವು ಸಹ ಅಗತ್ಯವಾಗಿ ಬೇಕಾಗಬಹುದೇ ಎಂಬ ಪ್ರಶ್ನೆ ಉಂಟಾಗಿದೆ.ಇದೇ ಕಾರಣಕ್ಕಾಗಿ ಪುರಸಭೆ ಅಧಿಕಾರಿಗಳು ಹಾಗೂ ತಾಲೂಕ ಆಡಳಿತವು ಹಗ್ಗದ ವ್ಯಾಪಾರಿಗಳಿಗೆ ಹೆಚ್ಚಿನ ಅವಕಾಶ ಕೊಟ್ಟು ಸಹಕರಿಸುತ್ತಿದ್ದಾರೆಯೇ ? ಎಂಬ ಅನುಮಾನಗಳು ಸಾರ್ವಜನಿಕ ವಲಯದಲ್ಲಿ ಹುಟ್ಟಿಕೊಂಡಿದೆ. ಇನ್ನಾದರೂ ಸಂಬಂಧಪಟ್ಟ ಅಧಿಕಾರಿಗಳು ಇತ್ತ ಕಡೆ ಗಮನ ಹರಿಸುತ್ತಾರಾ ಎಂದು ಕಾದು ನೋಡಬೇಕು.

# ಆತ್ಮ ನಿರ್ಭರ್ ನಧಿ ಯೋಜನೆಯಡಿ ಬೀದಿ ಬದಿ ವ್ಯಾಪಾರಿಗಳಿಂದ ಅರ್ಜಿ ಆಹ್ವಾನ

ಶಿವಮೊಗ್ಗ, ಜೂನ್ 29. ಕೇಂದ್ರ ಸರ್ಕಾರದ ಆತ್ಮ ನರ್ಭರ ನಧಿ ಯೋಜನೆಯಡಿ ವಿಶೇಷ ಕಿರು ಸಾಲ ಸೌಲಭ್ಯ ಯೋಜನೆಯಡಿ ಬೀದಿ ಬದಿ ವ್ಯಾಪಾರಿಗಳಿಗೆ ಸಾಲ ಸೌಲಭ್ಯಕ್ಕಾಗಿ ಅರ್ಜಿ ಆಹ್ವಾನಸಲಾಗಿದೆ.

ಜುಲೈ 01, 2020 ರಿಂದ ಮಾರ್ಚ್ 31, 2022 ರವರೆಗಿನ ಈ ಯೋಜನೆಯು ಬೀದಿ ಬದಿ ವ್ಯಾಪಾರಸ್ಥರಿಗೆ ಬ್ಯಾಂಕ್‌ಗಳ ಮೂಲಕ ಹತ್ತು ಸಾವಿರ ರೂ.ಗಳ ವರೆಗೆ ಸಾಲ ಸೌಲಭ್ಯ ನೀಡುವುದು, ನಯಮಿತವಾಗಿ ಸಾಲ ಮರುಪಾವತಿಸಿದವರಿಗೆ ಶೇ. 7 ರಷ್ಟು ಬಡ್ಡಿ ಸಹಾಯಧನ ನೀಡುವುದು, ಡಿಜಿಟಲ್ ವಹಿವಾಟಿಗೆ ಉತ್ತೇಜನ ಹಾಗೂ ಬಹುಮಾನ ನೀಡುವ ಉದ್ದೇಶ ಹೊಂದಿದೆ.

ಸಮೀಕ್ಷೆಯಲ್ಲಿ ಗುರುತಿಸಲ್ಪಟ್ಟ ಬೀದಿ ವ್ಯಾಪಾರಸ್ಥರು ನಗಧಿತ ನಮೂನೆ ಅರ್ಜಿಯನ್ನು ಶಿವಮೊಗ್ಗ ಮಹಾನಗರ ಪಾಲಿಕೆ ನಲ್ಮ್ ವಿಭಾಗದಿಂದ ಪಡೆದು, ಬಿಪಿಎಲ್ ಕಾರ್ಡ್, ಆಧಾರ್ ಕಾರ್ಡ್, ಓಟರ್ ಐಡಿ, ಬ್ಯಾಂಕ್‌ಪಾಸ್ ಬುಕ್, ಜಾತಿ ಮತ್ತು ಆದಾಯ ಪ್ರಮಾಣ ಪತ್ರ ಹಾಗೂ

ಬೀದಿ ವ್ಯಾಪಾರಸ್ಥರ ಗುರುತಿನ ಚೀಟಿ ಈ ಎಲ್ಲಾ ದಾಖಲೆಗಳ ಪ್ರತಿಗಳನ್ನು ಲಗತ್ತಿಸಿ ಜುಲೈ 20ರೊಳಗಾಗಿ ಸಲ್ಲಿಸುವಂತೆ ಪಾಲಿಕೆ ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ.

ಹೆಚ್ಚಿನ ಮಾಹಿತಿಗಾಗಿ ಮಹಾನಗರ ಪಾಲಿಕೆಯ ನಲ್ಮ್ ವಿಭಾಗವನ್ನು ಕಚೇರಿ ವೇಳೆಯಲ್ಲಿ ಸಂಪರ್ಕಿಸಿ ಪಡೆದುಕೊಳ್ಳುವುದು.

ಹೆಚ್ಚಿನ ಮಾಹಿತಿಗಾಗಿ ಮಹಾನಗರ ಪಾಲಿಕೆಯ ನಲ್ಮ್ ವಿಭಾಗವನ್ನು ಕಚೇರಿ ವೇಳೆಯಲ್ಲಿ ಸಂಪರ್ಕಿಸಿ ಪಡೆದುಕೊಳ್ಳುವುದು.